ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಬುಧವಾರ, ದಿನಾಂಕ : 30 ನೇ ಸೆಪ್ಟೆಂಬರ್, 2020

ಬೆಂಗಳೂರು ಗ್ರಾಮಾಂತರ ಜಿಲ್ಲೆಯ ರೈತರ ಸಮಸ್ಯೆಗಳ ಕುರಿತು

ಶ್ರೀ ನಸೀರ್ ಅಹ್ಮದ್(ವಿಧಾನಸಭೆಯಿಂದ ಚುನಾಯಿತರಾದವರು) -

1064 (1140) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಉಪ ವಿಭಾಗಾಧಿಕಾರಿ ಕಛೇರಿಯಿಂದ ರೈತರಿಗೆ ಆಗುತ್ತಿರುವ ತೊಂದರೆಗಳು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಜಮೀನಿನ ದಾಖಲಾತಿಗಳನ್ನು ಕೆಳಹಂತದ ಗ್ರಾಮ ಲೆಕ್ಕಿಗರು, ರಾಜಸ್ವ ನಿರೀಕ್ಷಕರು, ಉಪ ತಹಶೀಲ್ದಾರ್ ಮತ್ತು ತಹಶೀಲ್ದಾರರ ಮುಖಾಂತರ ಪರಿಶೀಲಿಸಿ ಉಪ ವಿಭಾಗಾಧಿಕಾರಿ ಕಛೇರಿಗೆ ಸಲ್ಲಿಸಿದ ನಂತರವೂ ಉಪ ವಿಭಾಗಾಧಿಕಾರಿಗಳು, ತಹಶೀಲ್ದಾರರ ಕಛೇರಿಗೆ ಕಳುಹಿಸುತ್ತಿರುವುದು ನಿಜವೇ; ಹಾಗಿದ್ದಲ್ಲಿ, ಇದಕ್ಕೆ ಕಾರಣವೇನು; ಇದರಿಂದ ರೈತರಿಗೆ ತೊಂದರೆಯಾಗುತ್ತಿಲ್ಲವೇ;

(ಇ) ತಹಶೀಲ್ದಾರರುಗಳು ಪುನಃ ಪರಿಶೀಲನೆಗೆ ಕೆಳಹಂತದ ಅಧಿಕಾರಿಗಳಿಗೆ ಕಳುಹಿಸುತ್ತಿರುವುದು ನಿಜವೇ; ಇದರಿಂದ ರೈತರಿಗೆ ಸರ್ಕಾರದಿಂದ ಸಿಗಬೇಕಾದ ಸವಲತ್ತುಗಳು ಸಿಗದೇ ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರದ ಕ್ರಮವೇನು;

(ಈ) ಈ ಅವ್ಯವಸ್ಥೆಗಳನ್ನು ಸರಿಪಡಿಸಲು ಸರ್ಕಾರ ಕೈಗೊಳ್ಳುವ ಕ್ರಮಗಳೇನು? (ವಿವರಗಳನ್ನು ನೀಡುವುದು)